

ಅರುಣ ಪಿ. ಭಟ್ಟ

## ವಾರ ಭವಿಷ್ಯ 30.4.2020ರಿಂದ 6.5.2020ರವರೆಗೆ




ನಿಮ್ಮ ವಿಶ್ವಾಸಾರ್ಹತೆ ಹೆಚ್ಚಾಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆರೋಗ್ಯ ಉತ್ತಮವಾಗಿದ್ದು, ಸಂತೋಷವಾಗಿ ಸಮಯ ಕಳೆಯಲಿದ್ದೀರಿ. ನಿಮ್ಮ ಕೆಲಸದ ಜತೆಜತೆಗೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ.

ಶುಭದಿನ 1. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಈ ವಾರ ಕೌಟುಂಬಿಕ ಹಾಗೂ ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಿ ಎದ್ದು ನಿಲ್ಲುವ ಸಾಧ್ಯತೆ ಇದೆ. ಕೌಟುಂಬಿಕ ವಿಚಾರದಲ್ಲಿ ಕ್ರಮೇಣವಾಗಿ ಪ್ರಗತಿ ಕಾಣುತ್ತದೆ.

ಶುಭದಿನ 5. ಸೌಂದರ್ಯ ಲಹರಿ ಪಠಿಸಿರಿ.




ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವಾತಾವರಣದಲ್ಲಿನ ಬದಲಾವಣೆಯಿಂದ ದೈಹಿಕವಾಗಿ ಅನಾರೋಗ್ಯ ಕಾಡಬಹುದು. ಸದಾ ಜತೆಗೆ ಇರುವವರೇ ಕೆಲವು ವಿಚಾರಗಳಲ್ಲಿ ನಿಮ್ಮನ್ನು ನಿಂದಿಸುವ ಸಾಧ್ಯತೆ ಇದೆ.

ಶುಭದಿನ 4. ಕಾಲಭೈರವನ ಸೇವೆ ಮಾಡಿರಿ.




ವಾರದ ದ್ವಿತೀಯಾರ್ಧದಲ್ಲಿ ಖರೀದಿ ಮಾಡಬೇಕು ಎಂದು ನೀವು ಲೆಕ್ಕ ಹಾಕಿಕೊಂಡಿದ್ದ ಭೂಮಿಯೊಂದರ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಉದ್ಯೋಗ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಾರದ ಅಂತ್ಯ ಭಾಗದಲ್ಲಿ ವರ್ಗಾವಣೆ ಆಗುವ ಸಾಧ್ಯತೆ ಇದೆ.

ಶುಭದಿನ 2. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.




ಸಂಬಂಧಿಕರ ಜತೆಗೆ ಉತ್ತಮ ಸಮಯ ಕಳೆಯುವ ಸಾಧ್ಯತೆ ಇದೆ. ಈ ವಾರ ಹಣ ಖರ್ಚು ಮಾಡಬೇಕಾಗುತ್ತದೆ. ತಲೆ ನೋವು ಹಲ್ಲು ನೋವು ಕಾಡಬಹುದು. ವ್ಯಾಪಾರ ವ್ಯವಹಾರಗಳಲ್ಲಿ ನಿಮಗೆ ಅನುಕೂಲಕರ ಸನ್ನಿವೇಶ ಇರುತ್ತದೆ.

ಶುಭದಿನ 2. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ವಾರದ ಶುರುವಿನಿಂದಲೇ ವ್ಯಾಪಾರಸ್ಥರು ಉದ್ಯೋಗಸ್ಥರು ತಮ್ಮ ವ್ಯಾಪಾರ ಉದ್ಯಮದ ಪ್ರಗತಿಯ ಪರಿಶೀಲನೆ ಮಾಡುವುದರಲ್ಲಿ ಸಕ್ರಿಯರಾಗುತ್ತೀರಿ. ನಿಮ್ಮ ಕಾರ್ಯಗಳನ್ನು ಈ ಹಿಂದೆಂದಿಗಿಂತಲೂ ವೇಗವಾಗಿ ಮಾಡಲಿದ್ದೀರಿ.

ಶುಭದಿನ 2. ವಿಷ್ಣು ಸಹಸ್ರನಾಮ ಓದಿರಿ.




ಮಕ್ಕಳ ಮದುವೆ ವಿಚಾರವಾಗಿ ಸಂಬಂಧಿಕರ ಜತೆಗೆ ಮಾತುಕತೆ ನಡೆಸಲಿದ್ದೀರಿ. ಈ ವಾರ ಹಲವು ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ವಾರದ ಕೊನೆಗೆ ಅನುಕೂಲಕರವಾಗಿ ಇರಲಿದೆ.

ಶುಭದಿನ 1. ಶಿವಕವಚ ಪಠಣ ಮಾಡಿರಿ.




ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭ ಪಡೆಯುವ ಅವಕಾಶ ಇದೆ. ಇದರಿಂದ ಹೆಚ್ಚು ಉತ್ಸಾಹಭರಿತರಾಗಿ, ಉಲ್ಲಸಿತರಾಗಿ ಕಾಣಿಸಿಕೊಳ್ಳಲಿದ್ದೀರಿ.

ಶುಭದಿನ 1. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಬಹಳ ಪ್ರಯತ್ನ ಮಾಡುತ್ತೀರಿ. ನೀವು ಹಾಕಿದ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ.

ಶುಭದಿನ 6. ಲಿಂಗಾಷ್ಟಕ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಉದ್ಯೋಗ ಕ್ಷೇತ್ರದಲ್ಲಿ ಅದ್ಭುತವಾದ ಸಾಧನೆ ಮಾಡುವ ಅವಕಾಶಗಳಿವೆ. ನಿಮ್ಮ ಪಾಲಿಗೆ ದೊರೆಯುವ ಅವಕಾಶಗಳನ್ನು ಬಹಳ ಚೆನ್ನಾಗಿ ಬಳಸಿಕೊಳ್ಳಲಿದ್ದೀರಿ. ಆರೋಗ್ಯ ಉತ್ತಮವಾಗಿ ಇರುತ್ತದೆ.

ಶುಭದಿನ 4. ಸುಬ್ರಮಣ್ಯ ಜಪ ಮಾಡಿರಿ.




ಈ ಅವಧಿಯಲ್ಲಿ ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಶ್ವಾಸಕೋಶ ಸಂಬಂಧಿ ಸಮಸ್ಯೆ ಕಾಡಬಹುದು. ವಾರದ ದ್ವಿತೀಯಾರ್ಧದಲ್ಲಿ ನಿಮ್ಮ ಬಹುತೇಕ ಸಮಸ್ಯೆಗಳಿಗೆ ಪರಿಹಾರಗಳು ದೊರೆಯುತ್ತವೆ.

ಶುಭದಿನ 1. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯೊಂದರ ಜತೆ ಮಹತ್ತರವಾದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ಶ್ವಾಸಕೋಶ ಸಮಸ್ಯೆ ಎದುರಾಗಬಹುದು.

ಶುಭದಿನ 2. ಶ್ರೀ ದುರ್ಗಾ ಆರಾಧನೆ ಮಾಡಿರಿ.


DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ
ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ
